ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ., ರವರ ನ್ಯಾಯಾಲಯದಲ್ಲಿ, ತರೀಕೆರೆ.

ಸಿಸಿ ನಂಬರ್.1294/2023

| | | | |
|---|---|---|---|
| ಸಾಕ್ಷಿಯ ಹೆಸರು | : ಹೊನ್ನೂರಸ್ವಾಮಿ | | ಸಿ.ಡಬ್ಲ್ಯು 3 |
| ತಂದೆಯ ಹೆಸರು | : ಓಬಣ್ಣ | | ಪಿ.ಡಬ್ಲ್ಯು 3 |
| ವಯಸ್ಸು | : 41 ವರ್ಷ | | |
| ಉದ್ಯೋಗ | : ಆಟೋ ಚಾಲಕ | | |
| ವಾಸ ಸ್ಥಳ | : ಗೊಲ್ಲಪಲ್ಲಿ, ರಾಯದುರ್ಗ ತಾಲ್ಲೂಕು | | |

ದಿನಾಂಕಃ20.11.2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು:

ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ. ರವರಿಂದಃ-

ದಿನಾಂಕ 14.06.2023 ರಂದು ಎಚ್ಚೈರ್ ಲಾರಿ ನಂ.ಕೆ.ಎ.16-ಡಿ 5417 ರಲ್ಲಿ ಬೆಳಗ್ಗೆ 11.30 ಗಂಟೆಯ ಸುಮಾರಿಗೆ ಗೊಬ್ಬರವನ್ನು ಅನ್ಲೋಡ್ ಮಾಡಲು ತರೀಕೆರೆಗೆ ಲಾರಿಯು ಬಂದಿತ್ತು. ತೋಟದಲ್ಲಿ ರಸ್ತೆ ಚೆನ್ನಾಗಿಲ್ಲದ ಕಾರಣ ಏಕಾಏಕಿ ಲಾರಿಯ ಹಿಂದಿನ ಬಾಗಿಲು ತೆಗೆದುಕೊಂಡು ವಾಹನವು ಹಿಂಬಂದಿಗೆ ಚಲಿಸಿತು. ಲಾರಿಯ ಹಿಂದೆ ಚಿತ್ತಣ್ಣ ಎಂಬ ವ್ಯಕ್ತಿ ನಿಂತಿದ್ದ. ಆತನು ನನ್ನ ಭಾವ ಮೈದುನ ಇರುತ್ತಾನೆ. ಲಾರಿ ಆತನಿಗೆ ಬಡಿದು ಚಿತ್ತಣನು ಕಲ್ಲಿನ ಮೇಲೆ ಬಿದ್ದು ತಲೆಗೆ ಗಾಯವಾಗಿ ಮರಣ ಹೊಂದಿದನು. ಯಾರ ತಪ್ಪಿನಿಂದ ಅಪಘಾತ ಆಗಿದೆ ಎಂದು ನನಗೆ ಹೇಳಲು ಬರುವುದಿಲ್ಲ.

(ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಅಂತ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ. ರವರು ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು)

ಪಾಟೀ ಸವಾಲುಃ ಮಾನ್ಯ ಸ.ಸ.ಅ.ರವರಿಂದಃ-

ಪೋಲೀಸರು ಈ ಪ್ರಕರಣದಲ್ಲಿ ನನ್ನ ಹೇಳಿಕೆಯನ್ನು ಪಡೆದುಕೊಂಡಿದ್ದಾರೆ ಎಂದರೆ ಸರಿಯಲ್ಲ. ಅದರಲ್ಲಿ ಆರೋಪಿಯ ತಪ್ಪಿನಿಂದ ಅಪಘಾತ ಆಗಿದೆ ಎಂದು ಹೇಳಿ ಬರೆಸಿದ್ದೇನೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಅಲ್ಲಿದ ಹೇಳಿಕೆಯನ್ನು ನಿಪಿ-10 ಎಂದು ಗುರುತಿಸಲಾಯಿತು.

<u>ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ</u>

ಘಟನೆ ನಡೆಯಬೇಕಾದರೆ ನಾನು ಸ್ಥಳದಲ್ಲಿ ಇರಲಿಲ್ಲ ಎಂದರೆ ಸರಿ. ನನಗೆ ಅಪಘಾತದ ಬಗ್ಗೆ ವೈಯುಕ್ತಿಕವಾಗಿ ಗೊತ್ತಿಲ್ಲ ಎಂದರೆ ಸರಿ.

<u>ಮರುವಿಚಾರಣೆ :</u> ಇಲ್ಲಃ

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಇ ಎ ಒ

ಸಹಿ/-

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂ., ರವರ ನ್ಯಾಯಾಲಯ, ತರೀಕೆರೆ.